# ಪ್ರಧಾನಮಂತ್ರಿಯಿಂದ ರಷ್ಯಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿ ಸ್ವೀಕಾರ

ಜುಲೈ 09, 2024

ಕ್ರೆಮ್ಲಿನ್‌ನ ಸೈಂಟ್ ಆಂಡ್ರ್ಯೂ ಹಾಲ್‌ನಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ, ರಷ್ಯಾ ಒಕ್ಕೂಟದ ಅಧ್ಯಕ್ಷರಾದ ಗೌರವಾನ್ವಿತ ಶ್ರೀ ವ್ಲಾದಿಮಿರ್ ಪುಟಿನ್ ಅವರು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರಿಗೆ ರಷ್ಯಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿಯಾದ "ದಿ ಆರ್ಡರ್ ಆಫ್ ಸೈಂಟ್ ಆಂಡ್ರ್ಯೂ ದಿ ಅಪೋಸಲ್" ಪ್ರದಾನ ಮಾಡಿದರು. ಭಾರತ-ರಷ್ಯಾ ಬಾಂಧವ್ಯವನ್ನು ಮತ್ತಷ್ಟು ಬೆಳೆಸುವಲ್ಲಿ ಪ್ರಧಾನಿ ಮೋದಿಯವರು ನೀಡಿದ ಕೊಡುಗೆಗಾಗಿ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು. 2019ರಲ್ಲೇ ಈ ಪ್ರಶಸ್ತಿಯನ್ನು ಘೋಷಿಸಲಾಗಿತ್ತು.

2. ಪ್ರಶಸ್ತಿ ಸ್ವೀಕರಿಸಿದ ಪ್ರಧಾನಮಂತ್ರಿ ಮೋದಿಯವರು, ಈ ಪ್ರಶಸ್ತಿಯನ್ನು ಭಾರತದ ಜನರಿಗೆ ಮತ್ತು ಭಾರತ ಹಾಗೂ ರಷ್ಯಾದ ನಡುವಿನ ಸಾಂಪ್ರದಾಯಿಕ ಸ್ನೇಹ ಬಂಧಕ್ಕೆ ಸಮರ್ಪಿಸಿದರು. ಅಲ್ಲದೆ, ಈ ಮಾನ್ಯತೆಯು ಉಭಯ ರಾಷ್ಟ್ರಗಳ ನಡುವಿನ ವಿಶೇಷ ಮತ್ತು ಗೌರವಾನ್ವಿತ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಬೆಳಗುವಂತೆ ಮಾಡಿದೆ ಎಂದರು.

3. ಈ ಪ್ರಶಸ್ತಿಯನ್ನು ಸುಮಾರು 300 ವರ್ಷಗಳ ಹಿಂದೆಯೇ ಸ್ಥಾಪಿಸಲಾಗಿದೆ. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ಈ ಪ್ರಶಸ್ತಿಯನ್ನು ಪಡೆದ ಮೊದಲ ಭಾರತೀಯ ನಾಯಕ ಎನಿಸಿಕೊಂಡಿದ್ದಾರೆ.

**ಮಾಸ್ಕೋ**
**ಜುಲೈ 09, 2024**